**ದಿನಾಂಕ: 04.09.2021 ರಂದು 11-00 ಕ್ಕೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 177ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಬಿಡಬ್ಲ್ಯೂಎಸ್ಎಸ್ಬಿ ಅಭಿಯಂತರರು |
| ಸದಸ್ಯರುಗಳು | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| ಸದಸ್ಯರುಗಳು | ಬೆಸ್ಕಾಂ ಅಧಿಕಾರಿಗಳು |
| ಸದಸ್ಯರುಗಳು | ತೋಟಗಾರಿಕೆ ಅಧಿಕಾರಿ (Horti. Inspector) |
| ಸದಸ್ಯರುಗಳು | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| ಸದಸ್ಯರುಗಳು | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| ಸದಸ್ಯರುಗಳು | ಅರಣ್ಯ ಸಂರಕ್ಷಣಾಧಿಕಾರಿಗಳು |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- 9ನೇ ಅಡ್ಡರಸ್ತೆ, ರಾಗಿಗುಡ್ಡ ಸ್ಲಂನ ಹತ್ತಿರ ಇರುವ ಖಾಲಿ ನಿವೇಶನವನ್ನು ಸ್ವಚ್ಛಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಲಾಯಿತು.
- 13ನೇ ಅಡ್ಡರಸ್ತೆ, 9ನೇ ಮುಖ್ಯರಸ್ತೆ ಹಾಗೂ 4ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆಗಳಲ್ಲಿ ಮ್ಯಾನ್‌ಹೋಲ್‌ನಿಂದ ನೀರು ಹೊರಹೊಮ್ಮುತ್ತಿದ್ದು ಇದರಿಂದಾಗಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ಸಂಬಂಧಪಟ್ಟ ಇಲಾಖೆಗೆ ಸೂಚಿಸುವಂತೆ ಚರ್ಚಿಸಲಾಯಿತು.
- 9ನೇ ಮುಖ್ಯರಸ್ತೆ ಮತ್ತು 13ನೇ ಅಡ್ಡರಸ್ತೆಯ ಒಕ್ಕಲಿಗ ಸಂಘ ಹಾಸ್ಟೆಲ್‌ನ ಎದುರು ಇರುವ ಚರಂಡಿಯಲ್ಲಿ ಹೂಳೆತ್ತುವ ಕಾಮಗಾರಿಯನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಚರ್ಚಿಸಲಾಯಿತು.

➢ ಪು.ತಿ.ನೋ

- ರಸ್ತೆಯನ್ನು ಸ್ವಚ್ಛತಾ ಕಾರ್ಯ ಹಾಗೂ ಬಿದ್ದಿರುವ ಮರದ ರೆಂಬೆ-ಕೊಂಬೆಗಳನ್ನು ತೆರವುಗೊಳಿಸುವಂತೆ ಸಂಬಂಧಪಟ್ಟ ಇಲಾಖೆಗಳಿಗೆ ಸೂಚಿಸುವಂತೆ ಕೋರಲಾಯಿತು.
- ಉದ್ಯಾನವನದಲ್ಲಿ ದೀಪಗಳನ್ನು ದುರಸ್ಥಿಗೊಳಿಸುವಂತೆ ಸಂಬಂಧಪಟ್ಟ ಇಲಾಖೆಗೆ ಸೂಚಿಸಲು ಕೋರಲಾಯಿತು.
- ಜೆ.ಪಿ.ನಗರ ವ್ಯಾಪ್ತಿಯ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಸಿಸಿಟಿವಿ ಕ್ಯಾಮರಾಗಳನ್ನು ದುರಸ್ಥಿಗೊಳಿಸುವಂತೆ ಸಂಬಂಧಪಟ್ಟ ಇಲಾಖೆಗೆ ಸೂಚಿಸುವಂತೆ ಚರ್ಚಿಸಲಾಯಿತು.
- ಇತ್ತೀಚಿನ ದಿನಗಳಲ್ಲಿ ಮುಂಗಾರು ಮಳೆಯಾಗುತ್ತಿದ್ದು, ಮಳೆಯ ನೀರನ್ನು ಒಳಚರಂಡಿ ಪೈಪ್‌ಲೈನ್‌ಗೆ ಸಂಪರ್ಕವನ್ನು ಕಲ್ಪಿಸಿರುತ್ತಾರೆ. ಇದರಿಂದಾಗಿ ಮಳೆಯ ಸಂದರ್ಭದಲ್ಲಿ ಮ್ಯಾನ್‌ಹೋಲ್‌ನಿಂದ ನೀರು ಹೊರಹೊಮ್ಮುತ್ತದೆ. ಆದುದರಿಂದ ಬಿಡಬ್ಲ್ಯೂಎಸ್‌ಎಸ್‌ಬಿ ರವರು ಮಳೆಯ ನೀರನ್ನು ಒಳಚರಂಡಿಗೆ ಸಂಪರ್ಕ ನೀಡಿರುವವರ ಮೇಲೆ ಕ್ರಮ ಜರುಗಿಸುವ ಬಗ್ಗೆ ಚರ್ಚಿಸಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಸದಸ್ಯ ಕಾರ್ಯದರ್ಶಿ<br>ಹಾಗೂ ಕಿರಿಯ ಅಭಿಯಂತರರು<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | Nagaraju H<br>ಅಧ್ಯಕ್ಷರು<br>ವಾರ್ಡ್ ಸಮಿತಿ, ವಾರ್ಡ್ ನಂ. 177<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |